# ಎನ್ಐಟಿಕೆಯಲ್ಲಿ ಬಾಹ್ಯಾಕಾಶ ದಿನಾಚರಣೆ

ಮಂಗಳೂರು: ಸುರತ್ಕಲ್‌ನ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕರ್ನಾಟಕ (ಎನ್ಐಟಿಕೆ) ಕ್ಯಾಂಪಸ್‌ನಲ್ಲಿ ರಾಷ್ಟ್ರೀಯ ಬಾಹ್ಯಾಕಾಶ ದಿನ ಆಚರಿಸಲಾಯಿತು. ಕಾರ್ಯಕ್ರಮ ಉದ್ಘಾಟಿಸಿದ ಇಸ್ರೋದ ಮಾಜಿ ನಿರ್ದೇಶಕ ಡಾ.ವೆಂಕಟಕೃಷ್ಣನ್ ಪಿ.ವಿ. ಅವರು ಭಾರತದ ಬಾಹ್ಯಾಕಾಶ ಸಾಧನೆಗಳು ಮತ್ತು ನಾವೀನ್ಯತೆ ಬಗ್ಗೆ ಪ್ರಮುಖ ಭಾಷಣ ಮಾಡಿದರು.

**» ಸಾಧನೆ ಮತ್ತು ನಾವೀನ್ಯತೆ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ**

ಎನ್ಐಟಿಕೆ ನಿರ್ದೇಶಕ ಪ್ರೊ.ಬಿ.ರವಿ ಮತ್ತು ಡೀನ್ ಪ್ರೊ.ಉದಯ ಭಟ್ ಕೆ. ಬಾಹ್ಯಾಕಾಶ ಸಂಶೋಧನೆ ಹಾಗೂ ಅಭಿವೃದ್ಧಿಯ ಮಹತ್ವ ತಿಳಿಸಿದರು. ಸಮಾರಂಭದ ನಂತರ ತಾಂತ್ರಿಕ ಸೆಷನ್‌ಗಳು, ಪ್ಯಾನಲ್ ಚರ್ಚೆಗಳು ಮತ್ತು ಬಾಹ್ಯಾಕಾಶ ಉದ್ಯಮದ ತಜ್ಞರೊಂದಿಗೆ ವಿದ್ಯಾರ್ಥಿಗಳ ಸಂವಹನ ನಡೆಯಿತು.



ಎನ್ಐಟಿಕೆ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯಲ್ಲಿ ಇಸ್ರೋದ ಮಾಜಿ ನಿರ್ದೇಶಕ ಡಾ.ವೆಂಕಟಕೃಷ್ಣನ್ ಪಿ.ವಿ., ಎನ್ಐಟಿಕೆ ನಿರ್ದೇಶಕ ಪ್ರೊ.ಬಿ.ರವಿ ಮತ್ತು ಡೀನ್ ಪ್ರೊ.ಉದಯ ಭಟ್ ಕೆ ಮೊದಲಾದವರಿದ್ದರು.

Vijayavani, Date: 26/08/24 p, 02